**ಸಾಕ್ಷಿಗೆ ದಿನಾಂಕಃ 25.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.NMA ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.**2** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು, **IMV** ವರದಿಯನ್ನು ನಿ.ಪಿ.**4** ಎಂದು, ಮತ್ತು ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**5** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**6** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.6 ಎಂದು ಗುರುತು ಆಗಿರುವ ದಾಖಲೆಗಳು ದೊಡ್ಡಬೆಲವಂಗಲ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) **ಮೂರು ಡಿಸ್ಚಾರ್ಜ್ ಸಮ್ಮರಿಗಳನ್ನು** ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**7** ರಿಂದ ನಿ.ಪಿ.**9** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.**7** ಮತ್ತು ನಿ.ಪಿ.**9** ದಾಖಲೆಗಳು ತಲಾ ಎರಡು ಹಾಳೆಗಳನ್ನು ಒಳಗೊಂಡಿವೆ.

4) ಒಟ್ಟು **20** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**10** ಎಂದು ಗುರುತಿಸಿದೆ.

5) ಒಟ್ಟು **28** ಮೆಡಿಕಲ್ **Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**11** ಎಂದು ಗುರುತಿಸಿದೆ.

6) ಒಟ್ಟು **18 X-ray films** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**12** ಎಂದು ಗುರುತಿಸಿದೆ.

7) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ನೆರಳಚ್ಚು ಪ್ರತಿ **(photocopy)** ಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ನೆರಳಚ್ಚು ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು

ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ನೆರಳಚ್ಚು ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ನೆರಳಚ್ಚು ಪ್ರತಿಯನ್ನು ನಿ.ಪಿ.**13** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

8) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು: 2 ನೇ ಎದುರುದಾರರ / Insurance company ಪರ ವಕೀಲರಾದ ಶ್ರೀ.SMV ರವರಿಂದಃ**

1) ಅಪಘಾತದ ಸಮಯದಲ್ಲಿ ನಾನು ನನ್ನ ದ್ವಿಚಕ್ರ ವಾಹನವನ್ನು ಚಾಲನೆ ಮಾಡಿಕೊಂಡು ಹೋಗುತ್ತಿದ್ದೆನು. ಅಪಘಾತದ ಸಮಯದಲ್ಲಿ ನನ್ನ ಬಳಿ ಚಾಲನಾ ಪರವಾನಗಿಯು ಇತ್ತು. ಅಪಘಾತದ ಸಮಯದಲ್ಲಿ ನನ್ನ ಚಾಲನಾ ಪರವಾನಗಿಯು ಎಲ್ಲೋ ಬಿದ್ದು ಹೋಗಿದೆ.

2) ನನ್ನ ಚಾಲನಾ ಪರವಾನಗಿಯ ಧೃಡೀಕೃತ ನಕಲನ್ನು ಹಾಜರುಪಡಿಸಲು ಸಾಧ್ಯವಿಲ್ಲ.

3) ಅಪಘಾತದ ಸಮಯದಲ್ಲಿ ನಾನು ಹೆಲ್ಮೆಟ್ ಹಾಕಿರಲಿಲ್ಲ ಎಂದರೆ ಸುಳ್ಳು.

4) ನನಗೆ ದ್ವಿಚಕ್ರ ವಾಹನವನ್ನು ಚಾಲನೆ ಮಾಡಲು ಬರುವುದಿಲ್ಲ ಮತ್ತು ಹಾಗಿದ್ದರೂ ಸಹಾ ಹೆದ್ದಾರಿಯಲ್ಲಿ ನಾನು ದ್ವಿಚಕ್ರ ವಾಹನವನ್ನು ಚಾಲನೆ ಮಾಡಿಕೊಂಡು ಹೋಗಿದ್ದೇನೆ ಎಂದರೆ ಸುಳ್ಳು.

5) ನಾನೇ ನನ್ನ ದ್ವಿಚಕ್ರ ವಾಹನವನ್ನು ವೇಗವಾಗಿ ಮತ್ತು ಅಡ್ಡಾದಿಡ್ಡಿಯಾಗಿ ಚಾಲನೆ ಮಾಡಿ ನನ್ನ ವಾಹನವನ್ನು ಟ್ಯಾಂಕರ್ ವಾಹನಕ್ಕೆ ಡಿಕ್ಕಿ ಹೊಡೆಸಿದ್ದೇನೆ ಎಂದರೆ ಸುಳ್ಳು.

6) ನನಗೆ 68 ವರ್ಷ ವಯಸ್ಸು ಆಗಿದೆ ಮತ್ತು ನನ್ನ ಕೈ ಕಾಲುಗಳು ನಡುಗಲು ಪ್ರಾರಂಭ ಆಗಿವೆ ಮತ್ತು ಆ ಕಾರಣದಿಂದ ನನಗೆ ದ್ವಿಚಕ್ರ ವಾಹನವನ್ನು ಚಾಲನೆ ಮಾಡಲು ಆಗುವುದಿಲ್ಲ ಎಂದರೆ ಸುಳ್ಳು.

7) ನಾನು ತರಕಾರಿ ವ್ಯಾಪಾರ ಮಾಡುತ್ತಿದ್ದೆನು ಮತ್ತು ಒಂದು ತಿಂಗಳಿಗೆ 30 ಸಾವಿರ ರೂಪಾಯಿಗಳನ್ನು ಸಂಪಾದನೆ ಮಾಡುತ್ತಿದ್ದೆನು ಎನ್ನುವ ಬಗ್ಗೆ ನನ್ನ ಬಳಿ ಯಾವುದೇ ದಾಖಲಾತಿಗಳು ಇರುವುದಿಲ್ಲ.

8) ಇವತ್ತಿಗೂ ಸಹಾ ನಾನು ತರಕಾರಿ ವ್ಯಾಪಾರ ಮಾಡುತ್ತಿದ್ದೇನೆ ಎಂದರೆ ನನಗೆ ಏಳಲು, ಕೂರಲು ಆಗುವುದಿಲ್ಲ ಮತ್ತು ಆ ಕಾರಣದಿಂದ ವ್ಯಾಪಾರ ಮಾಡುತ್ತಿಲ್ಲ.

9) ಕೇವಲ ಪರಿಹಾರವನ್ನು ಪಡೆಯಬೇಕು ಎಂಬ ಉದ್ದೇಶದಿಂದ ನಾನು ಆಸ್ಪತ್ರೆಗೆ ದಾಖಲು ಆಗಿದ್ದೆನು ಮತ್ತು ನನ್ನ ಅನುಕೂಲಕ್ಕೆ ತಕ್ಕ ಹಾಗೆ ದಾಖಲೆಗಳನ್ನು ಸೃಷ್ಟಿ ಮಾಡಿ ಈ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೇನೆ ಎಂದರೆ ಸುಳ್ಳು.

10) ನಾನು duplicate ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದೇನೆ ಎಂದರೆ ಸುಳ್ಳು.

11) ನನ್ನ ಬಳಿ ಬಿ.ಪಿ.ಎಲ್ ಪಡಿತರ ಚೀಟಿ ಇದೆ. ನನ್ನ ಬಳಿ ಬಿ.ಪಿ.ಎಲ್ ಪಡಿತರ ಚೀಟಿ ಇರುವ ಕಾರಣದಿಂದ ನನಗೆ ಉಚಿತವಾಗಿ ಅಥವಾ ಬಹಳ ಕಡಿಮೆ ದರದಲ್ಲಿ ಚಿಕಿತ್ಸೆಯನ್ನು ನೀಡಿದ್ದಾರೆ ಎಂದರೆ ಸುಳ್ಳು.

12) ಅಪಘಾತದಲ್ಲಿ ನನಗೆ ಆಗಿದ್ದ ಗಾಯಗಳು ವಾಸಿ ಆಗಿದೆ, ಆದರೆ ನನಗೆ ಓಡಾಡಲು ಆಗುವುದಿಲ್ಲ. ಕೇವಲ ಪರಿಹಾರವನ್ನು ಪಡೆಯಬೇಕು ಎಂಬ ಉದ್ದೇಶದಿಂದ ನಾನು ಈ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

**<u>ಪಾಟೀ ಸವಾಲು: 1 ನೇ ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ. ಆದ ಕಾರಣದಿಂದ ಪಾಟೀ ಸವಾಲು ಮುಂದೂಡಿದೆ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.